ಶ್ರೀ ಅಪ್ಪಚ್ಚು ರಂಜನ್ : ಅವರನ್ನು ಈ ಕೂಡಲೇ ಅಮಾನತ್ತು ಮಾಡಬೇಕೆಂದು ಒತ್ತಾಯ ಮಾಡುತ್ತೇನೆ. ಅವರನ್ನು ಅಮಾನತ್ತು ಮಾಡಿ ಈ ಬಗ್ಗೆ enquiry ಮಾಡಬೇಕೆಂದು ವಿನಂತಿ ಮಾಡುತ್ತೇನೆ.

ಅಧ್ಯಕ್ಷರು : ಆಯಿತು. ಮಾನ್ಯ ಗೃಹ ಸಚಿವರೆ, ತಾವು ಹೇಳಿ.

ಶ್ರೀ ಕೆ.ಜಿ.ಜಾರ್ಜ್ (ಗೃಹ ಸಚಿವರು) : ಮಾನ್ಯ ಅಧ್ಯಕ್ಷರೆ, ಸನ್ಮಾನ್ಯ ಸದಸ್ಯರುಗಳಾದ ಶ್ರೀ ಕೆ.ಜಿ.ಬೋಪಯ್ಯನವರು ಹಾಗೂ ಶ್ರೀ ಅಪ್ಪಚ್ಚು ರಂಜನ್‌ರವರು ಪೊನ್ನಂಪೇಟೆ Sub-Inspector ವಿಚಾರ ಹಾಗೂ ನಾಪೋಕ್ಲು Sub-Inspector ವಿಚಾರದ ಬಗ್ಗೆ ನನ್ನ ಗಮನಕ್ಕೆ ತಂದಿದ್ದಾರೆ. ನಾನು ಈ ಬಗ್ಗೆ ಕೂಡಲೇ ಸಂಬಂಧಪಟ್ಟಂತಹ ಅಧಿಕಾರಿಗಳಿಂದ ವರದಿಯನ್ನು ತರಿಸಿ ಆ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳುತ್ತೇನೆ.

(2). ವಿಷಯ : ತುಮಕೂರು ಜಿಲ್ಲೆಯ ಮಧುಗಿರಿ ಪಟ್ಟಣ ಮತ್ತು ತಾಲ್ಲೂಕಿನಲ್ಲಿರುವ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ.

ಶ್ರೀ ಕೆ.ಎನ್.ರಾಜಣ್ಣ (ಮಧುಗಿರಿ) : ಸನ್ಮಾನ್ಯ ಅಧ್ಯಕ್ಷರೆ, ನನಗೆ ಅವಕಾಶ ಕೊಟ್ಟಿದ್ದಕ್ಕೆ ತಮಗೆ ವಂದನೆಗಳನ್ನು ಸಲ್ಲಿಸುತ್ತೇನೆ. ನಮ್ಮ ಕ್ಷೇತ್ರದಲ್ಲಿ ಇರತಕ್ಕಂಥ ಆರೋಗ್ಯ ಕೇಂದ್ರಗಳು ಹಾಗೂ ತಾಲ್ಲೂಕಿನಲಿರತಕ್ಕಂಥ 100 ಬೆಡ್ಸ್ ಆಸ್ಪತ್ರೆಗಳಲ್ಲಿ ಖಾಲಿ ಇರತಕ್ಕಂಥ ಡಾಕ್ಟರ್ಸ್ ಮತ್ತು ಇತರೆ ಸಿಬ್ಬಂದಿಗಳು ಏನಿದ್ದಾರೆ, ಆ ಸಿಬ್ಬಂದಿಗಳ ಕೊರತೆಯಿಂದ ಜನರಿಗಾಗಿರತಕ್ಕಂಥ ತೊಂದರೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯುವುದಕ್ಕೆ ಈ ಶೂನ್ಯವೇಳೆಯಲ್ಲಿ ಪ್ರಸ್ತಾಪ ಮಾಡಲಿಕ್ಕೆ ಇಚ್ಛೆಪಡುತ್ತಿದ್ದೇನೆ.

ಶ್ರೀ ಟಿ.ಬಿ.ಜಯಚಂದ್ರ (ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಪರವಾಗಿ): ಮಾನ್ಯ ಸದಸ್ಯರಾದ ಶ್ರೀ ರಾಜಣ್ಣನವರು ಎತ್ತಿರುವ ಪ್ರಶ್ನೆಗೆ ಆರೋಗ್ಯ ಸಚಿವರ ಪರವಾಗಿ ಒಂದು ಹೇಳಿಕೆಯನ್ನು ಕೊಡಲಿಕ್ಕೆ ಇಚ್ಛೆಪಡುತ್ತೇನೆ. ತುಮಕೂರು ಜಿಲ್ಲೆಯ ಮಧುಗಿರಿ ಪಟ್ಟಣ ಮತ್ತು ತಾಲ್ಲೂಕಿನಲ್ಲಿರುವ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ.

ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನಲ್ಲಿ 1 ಸಾರ್ವಜನಿಕ ಆಸ್ಪತ್ರೆ ಮತ್ತು 13 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇರುತ್ತವೆ.

ಮಧುಗಿರಿ ಸಾರ್ವಜನಿಕ ಆಸ್ಪತ್ರೆಯಲ್ಲಿ 12 ತಜ್ಞವೈದ್ಯರು ಮತ್ತು 1 ದಂತ ವೈದ್ಯರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 6 ತಜ್ಞರು ಕರ್ತವ್ಯ ನಿರ್ವಹಿಸುತ್ತಿದ್ದಾರೆ, (ಮಕ್ಕಳ ತಜ್ಞರು, ನೇತ್ರ ತಜ್ಞರು, ಕಿವಿ ಮೂಗು ಮತ್ತು ಗಂಟಲು ತಜ್ಞರು, ಸ್ತ್ರೀರೋಗ ತಜ್ಞರು, ಅರವಳಿಕೆ ತಜ್ಞರು, ಕೀಲು ಮೂಳೆ ತಜ್ಞರು) 6 ತಜ್ಞರ ಹುದ್ದೆ ಖಾಲಿ ಇವೆ. (ಜನರಲ್ ಮೆಡಿಸನ್, ಜನರಲ್ ಸರ್ಜರಿ, ರೇಡಿಯಾಲಜಿಸ್ಟ್,ಎಸ್.ಎಮ್.ಓ, ಡಿ.ಸಿ.ಎಮ್.ಓ, ಜಿ.ಡಿ.ಎಮ್.ಓ) ಸದರಿ ಆಸ್ಪತ್ರೆಯಲ್ಲಿ 63 ಇತರೆ ಅರೆ ವೈದ್ಯಕೀಯ ಹುದ್ದೆಗಳು ಮಂಜೂರಾಗಿದ್ದು, 33 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ, 30 ಹುದ್ದೆಗಳು ಖಾಲಿ ಇವೆ.

ಮಧುಗಿರಿ ತಾಲ್ಲೂಕಿನ 13 ಪ್ರಾಥಮುಕ ಆರೋಗ್ಯ ಕೇಂದ್ರಗಳಲ್ಲಿ 13 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 11 ವೈದ್ಯಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಮಿಡಿಗೇಶಿ ಮತ್ತು ಕೋಡ್ಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಹುದ್ದೆ ಖಾಲಿ ಇವೆ. ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇತರೆ 179 ಅರೆ ವೈದ್ಯಕೀಯ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 106 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ, 73 ಹುದ್ದೆಗಳು ಖಾಲಿ ಇವೆ. ಆದರೂ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ.

ಇಲಾಖೆಯ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ತೀವ್ರ ಕೊರತೆ ಇರುತ್ತದೆ. ಈ ಕೊರತೆ ನೀಗಿಸಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.) ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ.80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ.60,000 ರಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

ಕೆ.ಹೆಚ್.ಎಸ್.ಡಿ.ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ

ಮಾಸಿಕ ರೂ.65,000 ಹಾಗೂ ರೂ.50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ.5,000 ದಿಂದ ರೂ.10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ.8,000 ರಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ, ದಿನವೊಂದಕ್ಕೆ ರೂ.1,000 ರಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

ಈ ಮೇಲ್ಕಂಡ ಆದೇಶದಂತೆ ಕಳೆದ 2 ತಿಂಗಳಿಂದ ಕೀಲು ಮೂಳೆ ತಜ್ಞರು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ.

ಶ್ರೀ ಕೆ.ಎನ್.ರಾಜಣ್ಣ: ಸನ್ಮಾನ್ಯ ಅಧ್ಯಕ್ಷರೆ, ಇದರಲ್ಲಿ ಹೆಚ್ಚು ಚರ್ಚೆಗೆ ಅವಕಾಶ ಇಲ್ಲ. ಆದರೆ ಒಂದೇ ಒಂದು clarification ಏನೆಂದು ನಾನು ತೊಂದರೆಯಾಗಿರುವುದನ್ನು ತಮ್ಮ ಮೂಲಕ ಸರ್ಕಾರದ ಗಮನಕ್ಕೆ ತಂದು ತೊಂದರೆಗೆ ಪರಿಹಾರ ಪಡೆಯಬೇಕೆಂಬ ಉದ್ದೇಶದಿಂದ ಶೂನ್ಯವೇಳೆಯಲ್ಲಿ ಪ್ರಸ್ತಾಪ ಮಾಡಿರುವಂಥದ್ದು. ಆದರೆ ಇವರು ಅಧಿಕಾರಿಗಳು ಬರೆದುಕೊಟ್ಟಿರುವಂಥ ಉತ್ತರವನ್ನು ಓದತಕ್ಕಂಥದ್ದು ದೊಡ್ಡದಲ್ಲ. ನಾವು ತೊಂದರೆಯಾಗಿದೆ ಎಂದು ಹೇಳುತ್ತಿದ್ದೇವೆ. ಅವರು ಏನೂ ತೊಂದರೆಯಾಗಿಲ್ಲ ಎಂದು ಇವರು ಬರೆದುಕೊಡುತ್ತಾರೆ. ತಾವು ನಮ್ಮ ರಕ್ಷಣೆಗೆ ಬರಬೇಕು ಅಧ್ಯಕ್ಷರೆ, ನಾನು ತೊಂದರೆಯಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ತಮ್ಮ ಮೂಲಕ ತರುವುದಕ್ಕೆ ನಾನು ಪ್ರಯತ್ನ ಮಾಡುತ್ತಿದ್ದೇನೆ. ಇವರು ಕೊಟ್ಟಿರುವ ಉತ್ತರದಲ್ಲಿ ಯಾವುದೇ ತೊಂದರೆಯಾಗಿಲ್ಲ ಎಂದು ಹೇಳುತ್ತಿದ್ದಾರೆ. ತೊಂದರೆಯಾಗಿಲ್ಲ ಎಂದರೆ ನಮಗೇನು ಹುಚ್ಚು ಹಿಡಿದಿದೆಯೇ ಈ ಸದನದಲ್ಲಿ ಬಂದು ನಮಗೆ ತೊಂದರೆಯಾಗಿದೆ ಎಂದು ಹೇಳಿಕೊಳ್ಳುವುದಕ್ಕೆ? ಆದ್ದರಿಂದ ತಮ್ಮ ಮೂಲಕ ಸರ್ಕಾರಕ್ಕೆ ನಾವು ಮನವಿ ಮಾಡುವುದೇನೆಂದರೆ, ಏನು ತೊಂದರೆಯಾಗಿದೆ ಎಂಬುದರ ಬಗ್ಗೆ ಸರ್ಕಾರದ ಗಮನಕ್ಕೆ ತಂದಿದ್ದೇವೆ. ಅದನ್ನು ಪರಿಹಾರ ಮಾಡುವಂಥ ಪ್ರಯತ್ನ ಮಾಡುವುದನ್ನು ನಿರೀಕ್ಷೆ ನಾವು ಮಾಡುತ್ತೇವೆ. ಇವರು ತೊಂದರೆಯೇ ಆಗಿಲ್ಲವೆಂದು ಹೇಳುತ್ತಾ ಅಧಿಕಾರಿಗಳು ಬರೆದುಕೊಟ್ಟಿರುವುದನ್ನು

ಓದುವುದನ್ನು ನಾನು ನಿರೀಕ್ಷಿಸಿರಲಿಲ್ಲ. ಆದ್ದರಿಂದ ಅಧ್ಯಕ್ಷರೆ, ನೀವು ನಮ್ಮ ರಕ್ಷಣೆಗೆ ಬರಬೇಕಾಗುತ್ತದೆ. ಅಲ್ಲೇನು ಖಾಲಿಯಿರುವ ಹುದ್ದೆಗಳ ಬಗ್ಗೆ ಅಧಿಕಾರಿಗಳಿಂದಲೇ ತರಿಸಿಕೊಂಡಿರುವ statement ನಮ್ಮ ಹತ್ತಿರ ಇದೆ. ಅದನ್ನು ನಾನು ತಮಗೆ ತೋರಿಸುತ್ತೇನೆ. ಖಾಲಿ ಇರತಕ್ಕಂಥ ಹುದ್ದೆಗಳನ್ನು contract basis ಮೇಲೆ ತುಂಬತಕ್ಕಂಥದ್ದಕ್ಕೆ ಆದಷ್ಟು ಜಾಗ್ರತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ಕೊಡುತ್ತಾರೆಂದು ನಾವು ನಿರೀಕ್ಷೆ ಮಾಡುತ್ತೇವೆ. ಇವರು ಉತ್ತರದಲ್ಲಿ ತೊಂದರೆಯಾಗಿಲ್ಲವೆಂದು ಹೇಳುತ್ತಿದ್ದಾರೆ. ಈ ರೀತಿಯ ಉತ್ತರ ಕೇಳುವುದಕ್ಕೆ ನಾವು ಇಲ್ಲಿ ಬಂದು ಕುಳಿತಿಲ್ಲ. ನಾವು ತೊಂದರೆಯಾಗಿದೆ ಎಂದು ಹೇಳಿದ್ದೇವೆ. ಆದ್ದರಿಂದ ತಾವು ನಮ್ಮ ರಕ್ಷಣೆಗೆ ಬಂದು ಆ ಹುದ್ದೆಗಳನ್ನು contract basis ಮೇಲೆ ತುಂಬುತ್ತೇವೆಂದು ಹೇಳುವ ರೀತಿಯಲ್ಲಿ ಉತ್ತರ ಕೊಡುವಂತೆ ತಾವು ಅವರಿಗೆ ಸೂಚನೆ ಕೊಡಬೇಕೆಂದು ತಮ್ಮಲ್ಲಿ ಮನವಿ ಮಾಡುತ್ತೇನೆ.

(ಗೊಂದಲ)

ಶ್ರೀ ಕೆ.ಎನ್.ರಾಜಣ್ಣ : ದತ್ತ ನೀವು ಆಮೇಲೆ ಮಾತನಾಡಿ, ಸಚಿವರು ಉತ್ತರ ಹೇಳಲಿ.

ಅಧ್ಯಕ್ಷರು : ಮಧ್ಯದಲ್ಲಿ ಮಾತನಾಡಬೇಡಿ, ಇದು bad precedent ಆಗುತ್ತದೆ ಪ್ಲೀಸ್.

ಶ್ರೀ ಟಿ.ಬಿ.ಜಯಚಂದ್ರ : ಮಾನ್ಯ ಸದಸ್ಯರ ಆಕ್ರೋಶ ಏನೆಂಬುದು ನಮಗೆ ಅರ್ಥವಾಗುತ್ತದೆ. ವಸ್ತುಸ್ಥಿತಿ ಏನಿದೆ ಎನ್ನುವುದನ್ನು ಸರ್ಕಾರದ ಉತ್ತರದ ರೂಪದಲ್ಲಿಯೇ ಕೊಡಬೇಕಾಗುತ್ತದೆ. ಅದು ಶೂನ್ಯವೇಳೆಯಲ್ಲಿ ಪ್ರಸ್ತಾಪ ಮಾಡಿದಾಗ ಇದೇ ರೀತಿಯಲ್ಲಿ ಉತ್ತರ ಕೊಡತಕ್ಕಂತಹ ಸಂಪ್ರದಾಯವಿದೆ. ಅದೇ ಪ್ರಕಾರ ಉತ್ತರ ಕೊಡಬೇಕಾಗುತ್ತದೆ. ಆದರೆ ವಾಸ್ತವಿಕವಾಗಿ ಅಲ್ಲಿ ಏನು ಹುದ್ದೆಗಳು ಕೊರತೆ ಇದೆ ಅವರನ್ನು contract basis ಮೇಲೆ appoint ಮಾಡುವುದಕ್ಕೆ ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳುತ್ತದೆ.

ಅಧ್ಯಕ್ಷರು : ಆಯಿತು. ಶ್ರೀ ಅಂಗಾರರವರು ಮಾತನಾಡಿ.

(3). ವಿಷಯ: ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿನಲ್ಲಿ ವಾಣಿಜ್ಯ ವಿಭಾಗದ ಕಾಲೇಜಿಗೆ 225 ವಿದ್ಯಾರ್ಥಿಗಳನ್ನು ಸೇರಿಸಲು ವ್ಯವಸ್ಥೆ ಮಾಡುವ ಬಗ್ಗೆ.